ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಮಂಗಳವಾರ, ದಿನಾಂಕ : 23ನೇ ಜುಲೈ, 2019

ಅನುದಾನಿತ ಶಾಲೆಗಳಲ್ಲಿ ಮಂಜೂರಾದ ಹುದ್ದೆಗಳಲ್ಲಿ ನಿವೃತ್ತಿ, ಸಾವುಗಳಿಂದ ಖಾಲಿಯಾಗಿರುವ ಹುದ್ದೆಗಳ ಬಗ್ಗೆ

ಶ್ರೀ ಆಯನೂರು ಮಂಜುನಾಥ್ (ಪದವೀಧರರ ಕ್ಷೇತ್ರ):-

493 (508) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅನುದಾನಿತ ಶಾಲೆಗಳಲ್ಲಿ ಮಂಜೂರಾದ ಹುದ್ದೆಗಳಲ್ಲಿ, ನಿವೃತ್ತಿ, ಸಾವು ಇತ್ಯಾದಿ ಕಾರಣಗಳಿಂದಾಗಿ ಖಾಲಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇದ್ದಲ್ಲಿ, ಅವುಗಳನ್ನು ಭರ್ತಿ ಮಾಡಲು ಯಾವ ಕಾಲಮಿತಿಯೊಳಗೆ ಶಾಲಾ, ಕಾಲೇಜುಗಳಿಗೆ ಅನುಮತಿ ನೀಡಲಾಗುವುದು;

(ಇ) ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿರುವ ಖಾಯಂ ಹಾಗೂ ಅತಿಥಿ ಶಿಕ್ಷಕರೆಷ್ಟು; ಅತಿಥಿ ಶಿಕ್ಷಕರಿಗೆ ಉದ್ಯೋಗ ಭದ್ರತೆಯನ್ನು ನೀಡಲಾಗುವುದೇ;

(ಈ) ಸರ್ಕಾರವು ಅತಿಥಿ ಶಿಕ್ಷಕರಿಗೆ, ಉಪನ್ಯಾಸಕರಿಗೆ ಖಾಯಂಗೊಳಿಸುವ ಭರವಸೆಯನ್ನು ನೀಡಿದೆಯೇ; ನೀಡಿದ್ದಲ್ಲಿ, ಯಾವಾಗ ಖಾಯಂಗೊಳಿಸಲಾಗುವುದು?